**Akashvani : Bangalore**
**Regional Bulletin In Kannada**
**13.09.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**13.09.2024 / 18.40 hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

೧. **ಬೆಳಗಾವಿ-ಪುಣೆ ವಂದೇ ಭಾರತ್ ರೈಲು ಸಂಚಾರಕ್ಕೆ ಇದೇ ೧೯ ರಂದು ಪ್ರಧಾನಿ ಹಸಿರು ನಿಶಾನೆ**

೨. **ಇದೇ ೧೫ರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಗೆ ಜಿಲ್ಲಾಡಳಿತಗಳಿಂದ ಸಕಲ ಸಿದ್ಧತೆ**

೩. **ರಾಜ್ಯದಲ್ಲಿ ೪೫ ಸಾವಿರ ಕೋಟಿ ರೂಪಾಯಿಗಳ ರೈಲ್ವೆ ಯೋಜನೆ ಅನುಷ್ಠಾನಕ್ಕೆ ಕ್ರಮ- ಸಚಿವ ವಿ.ಸೋಮಣ್ಣ**

೪. **ಕೈಗಾರಿಕೆಗಳಿಗೆ ಅಗತ್ಯ ಸೌಲಭ್ಯ ಒದಗಿಸಲು ರಾಜ್ಯ ಸರ್ಕಾರ ಬದ್ಧ- ಸಚಿವ ಕೆ.ಎಚ್.ಮುನಿಯಪ್ಪ**

**<><*<><>*><>**

ಬೆಳಗಾವಿ ವಿಮಾನ ನಿಲ್ದಾಣವನ್ನು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ದರ್ಜೆಗೆ ಏರಿಸಿ ಅಭಿವೃದ್ಧಿಪಡಿಸುವ ಹಿನ್ನೆಲೆಯಲ್ಲಿ ಇಂದು ವಿಮಾನ ನಿಲ್ದಾಣ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ, ಸಲಹೆ-ಸೂಚನೆಗಳನ್ನು ನೀಡಲಾಗಿದೆ. ಇದಕ್ಕೆ ಅಗತ್ಯವಿರುವ ೧೪ ಎಕರೆ ಹೆಚ್ಚುವರಿ ಭೂಮಿಯನ್ನು ಸ್ವಾಧೀನಕ್ಕೆ ಪಡೆಯಲಾಗಿದೆ ಎಂದು ಬೆಳಗಾವಿ ಸಂಸದ ಜಗದೀಶ್ ಶೆಟ್ಟರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗಾವಿ-ಧಾರವಾಡ ನೇರ ಸಂಪರ್ಕ ರೈಲ್ವೆ ಮಾರ್ಗ ನಿರ್ಮಾಣ ಕಾಮಗಾರಿ ಆರಂಭಿಸಲು ಸೂಚಿಸಲಾಗಿದೆ. ಪುಣೆ-ಬೆಳಗಾವಿ ವಂದೇ ಭಾರತ್ ರೈಲು ಸಂಚಾರ ಇದೇ ೧೯ ರಂದು ಆರಂಭಗೊಳ್ಳಲಿದ್ದು, ಪ್ರಧಾನಿ ನರೇಂದ್ರ ಮೋದಿ ಅವರು ಹಸಿರು ನಿಶಾನೆ ತೋರಲಿದ್ದಾರೆ. ಈ ರೈಲು ವಾರದಲ್ಲಿ ಮೂರು ದಿನ ಮಾತ್ರ ಸಂಚರಿಸಲಿದ್ದು, ಮುಂಬರುವ ದಿನಗಳಲ್ಲಿ ವಾರಪೂರ್ತಿ ಸಂಚರಿಸುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

**<><*<><>*><>**

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಇದೇ ೧೫ ರಂದು ರಾಜ್ಯದಲ್ಲಿ ನಿರ್ಮಾಣ ಮಾಡುತ್ತಿರುವ ಮಾನವ ಸರಪಳಿ ವಿಶ್ವದಾಖಲೆಯಾಗಲಿದೆ. ಅಂದು ಚಿತ್ರದುರ್ಗ ಜಿಲ್ಲೆಯಲ್ಲಿ ನಿರ್ಮಿಸುತ್ತಿರುವ ೧೪೫ ಕಿಲೋ ಮೀಟರ್ ಉದ್ದದ ಮಾನವ ಸರಪಳಿ ರಾಜ್ಯದ ಇತರೆ ಜಿಲ್ಲೆಗಳ ಪೈಕಿ ಅತೀ ಉದ್ದದ ಮಾನವ ಸರಪಳಿಯಾಗಿದ್ದು, ಅಂದಾಜು ೧ ಲಕ್ಷದ ೫೦ ಸಾವಿರ ಜನರು ಇದರಲ್ಲಿ ಭಾಗವಹಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಆದರ್ಶಗಳು ಭಾರತೀಯ ಸಂವಿಧಾನ ಪೀಠಿಕೆಯ ಭಾಗ. ಪ್ರಜಾಪ್ರಭುತ್ವದ ಅಂಶಗಳನ್ನು

ಪ್ರತಿಯೊಬ್ಬರಿಗೂ ಮುಟ್ಟಿಸುವ ಕಾಳಜಿಯಿಂದ ಮಾನವ ಸರಪಳಿ ನಿರ್ಮಾಣ ಮಾಡುವ ಮೂಲಕ ಪ್ರಜಾಪ್ರಭುತ್ವದ ಮೌಲ್ಯವನ್ನು ಗೌರವಿಸುವಂತಹ ವಿಭಿನ್ನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

<><*<><>*><>

ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಇದೇ ೧೫ರಂದು ನಡೆಯಲಿರುವ ಮಾನವ ಸರಪಳಿಯಲ್ಲಿ ಜಿಲ್ಲೆಯ ಪ್ರತಿಯೊಬ್ಬರೂ ಸ್ವಯಂ ಪ್ರೇರಿತರಾಗಿ ಭಾಗವಹಿಸುವ ಮೂಲಕ ಕೈಜೋಡಿಸುವಂತೆ ಹಾಸನದ ಅಪರ ಜಿಲ್ಲಾಧಿಕಾರಿ ಕೆ.ಟಿ. ಶಾಂತಲಾ ಮನವಿ ಮಾಡಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಅರಕಲಗೂಡು ತಾಲೂಕಿನ ಕಡುವಿನ ಹೊಸಹಳ್ಳಿ ಗ್ರಾಮದಿಂದ ಬೇಲೂರು ತಾಲೂಕಿನ ಚನ್ನಾಪುರದ ಕೈಮರದವರೆಗೆ ೧೧೧ ಕಿಲೋ ಮೀಟರ್ ಮಾನವ ಸರಪಳಿ ಆಯೋಜಿಸಲಾಗಿದೆ. ಮಾನವ ಸರಪಳಿ ನಿರ್ಮಿಸಲು ೧ ಲಕ್ಷದ ೧೧ ಸಾವಿರ ಮಾನವ ಸಂಪನ್ಮೂಲದ ವ್ಯವಸ್ಥೆ ಮಾಡಲಾಗಿದೆ. ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ೯ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಮೇಲುಸ್ತುವಾರಿಗಾಗಿ ನಿಯೋಜಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ರಾಜ್ಯ ಸರ್ಕಾರ ಹಮ್ಮಿಕೊಂಡಿರುವ ಬೃಹತ್ ಮಾನವ ಸರಪಳಿ ಕಾರ್ಯಕ್ರಮವನ್ನು ಸಂಪೂರ್ಣ ಯಶಸ್ವಿಗೊಳಿಸಲು ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಬೀದರ್‌ನಿಂದ ಚಾಮರಾಜನಗರದವರೆಗೂ ೨ ಸಾವಿರದ ೫೦೦ ಕಿಲೋ ಮೀಟರ್ ಉದ್ದದ ಮಾನವ ಸರಪಳಿ ನಿರ್ಮಿಸುವ ಮೂಲಕ ವಿಶಿಷ್ಟವಾಗಿ ಆಚರಿಸುತ್ತಿದೆ. ಇದೇ ೧೫ರ ಭಾನುವಾರದಂದು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿಯೂ ೪೭.೫ ಕಿಲೋ ಮೀಟರ್ ಉದ್ದದ ಮಾನವ ಸರಪಳಿ ನಿರ್ಮಾಣವಾಗಲಿದ್ದು, ಇದಕ್ಕಾಗಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದರು.

<><*<><>*><>

ರಾಜ್ಯದಲ್ಲಿ ೪೫ ಸಾವಿರ ಕೋಟಿ ರೂಪಾಯಿಗಳ ರೈಲ್ವೆ ಯೋಜನೆಯನ್ನು ಅನುಷ್ಠಾನಗೊಳಿಸಲು ಮುಂದಾಗಿದ್ದೇವೆ ಎಂದು ಕೇಂದ್ರ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಮೈಸೂರಿನ ಅಶೋಕಪುರಂ ರೈಲ್ವೆ ಕಾರ್ಯಗಾರ ಹಾಗೂ ನಗರದ ರೈಲ್ವೆ ಕಾರ್ಯಾಗಾರಕ್ಕೆ ಭೇಟಿ ನೀಡಿ, ವಿವಿಧ ಕಾಮಗಾರಿಗಳನ್ನು ಪರಿಶೀಲಿಸಿ ನಂತರ ಮೈಸೂರು ವಿಭಾಗೀಯ ಹಿರಿಯ ರೈಲ್ವೆ ಅಧಿಕಾರಿಗಳ ಸಭೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಸೂರು ರೈಲ್ವೆ ವಿಭಾಗವನ್ನು ಅಭಿವೃದ್ಧಿಪಡಿಸಲು ಯೋಜಿಸಲಾಗಿದೆ. ಕೇಂದ್ರ ಸರ್ಕಾರ ಪ್ರತಿಯೊಂದು ವಿಭಾಗಕ್ಕೂ ೭ ಸಾವಿರದ ೫೭೦ ಕೋಟಿ ರೂಪಾಯಿ ಅನುದಾನ ನೀಡುತ್ತಿದೆ. ವರ್ತುಲ ರೈಲು ಯೋಜನೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗಿದೆ. ಇದಕ್ಕಾಗಿ ೪೪೦ ಕೋಟಿ ರೂಪಾಯಿಗಳನ್ನು ಮೀಸಲಿಗಿಡಲಾಗಿದೆ. ಬೆಂಗಳೂರು-ತುಮಕೂರು ಮತ್ತು ಬೆಂಗಳೂರು-ಚಾಮರಾಜನಗರ ಮೆಮೊ ರೈಲುಗಳು ಸಂಚರಿಸಲಿವೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಮಾಗಡಿ ತಾಲೂಕಿನ ಸರ್ವತೋಮುಖ ಅಭಿವೃದ್ಧಿಗೆ ರಾಜ್ಯ ಸರ್ಕಾರ ಎಲ್ಲಾ ರೀತಿಯ ಸಹಕಾರ ನೀಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಅವರು ಇಂದು ಎಂಟು ಕೋಟಿ ರೂಪಾಯಿಗಳ ವೆಚ್ಚದ ಮಾಗಡಿ

ಪುರಸಭೆ ಮಾರುಕಟ್ಟೆ ಮಳಿಗೆಗಳ ನಿರ್ಮಾಣಕ್ಕೆ, ಲೋಕೋಪಯೋಗಿ ಇಲಾಖೆ ವತಿಯಿಂದ ಮಾಗಡಿ ಪಟ್ಟಣದ ವ್ಯಾಪ್ತಿಯಲ್ಲಿ ಎಸ್.ಎಚ್.ಡಿ.ಪಿ.ಯ ೨೦ ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗೆ, ಮಾಗಡಿಯ ಜೂನಿಯರ್ ಕಾಲೇಜ್ ಆವರಣದಲ್ಲಿ ೭ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಆಡಿಟೋರಿಯಂ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದರು. ಮಾಗಡಿ ತಾಲೂಕು ಜೂನಿಯರ್ ಕಾಲೇಜಿನ ಕ್ರೀಡಾಂಗಣದ ಅಭಿವೃದ್ಧಿಗೆ ಭೂಮಿ ಪೂಜೆ ನೆರವೇರಿಸಿದ ಮುಖ್ಯಮಂತ್ರಿಗಳು, ಇದೇ ಸಂದರ್ಭದಲ್ಲಿ ವೈ.ಜಿ.ಗುಡ್ಡ ಮುಳುಗಡೆ ಪ್ರದೇಶದ ನಿರಾಶ್ರಿತರಿಗೆ ಹಕ್ಕು ಪತ್ರಗಳನ್ನು ವಿತರಿಸಿದರು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪ್ರತಿಯೊಂದು ಕುಟುಂಬದಲ್ಲಿ ಒಬ್ಬರಿಗಾದರೂ ಉದ್ಯೋಗ ದೊರೆಯಬೇಕು ಎನ್ನುವ ಉದ್ದೇಶದಿಂದ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಇದಕ್ಕೆ ಪೂರಕವಾಗಿ ಕೌಶಲ್ಯಾಭಿವೃದ್ಧಿ ಹಾಗೂ ಕೈಗಾರಿಕೆಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕಾರ್ಯಕ್ರಮ ರೂಪಿಸುತ್ತಿದೆ ಎಂದು ರಾಜ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕೌಶಲ್ಯ ಮಿಷನ್, ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಯೋಗದಲ್ಲಿ ದೇವನಹಳ್ಳಿಯಲ್ಲಿ ನಡೆದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಆದ ನಂತರ ಕೈಗಾರಿಕಾ ಪ್ರದೇಶದ ವ್ಯಾಪ್ತಿ ಹೆಚ್ಚಾಗುತ್ತಿದೆ. ಹಲವು ರೈತಾಪಿ ಕುಟುಂಬಗಳು ಕೈಗಾರಿಕೆಗಳಿಗೆ ಭೂಮಿ ನೀಡಿದ್ದಾರೆ. ಹಲವು ಕುಟುಂಬಗಳು ಕೃಷಿಯನ್ನು ಅವಲಂಬಿಸಿದ್ದವು. ಇದನ್ನು ಅರಿತು, ಮನೆಗೊಂದು ಉದ್ಯೋಗ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಉದ್ಯೋಗ ಮೇಳ ಅಯೋಜಿಸಲಾಗಿದೆ ಎಂದರು.

<><*<><>*><>

ನಾಳೆಯಿಂದ ಅಕ್ಟೋಬರ್ ೧ ರವರೆಗೆ ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯಲ್ಲಿ ಸ್ವಚ್ಛತೆಯೇ ಸೇವೆ ಕಾರ್ಯಕ್ರಮದಡಿ ಗಿಡ ನೆಡುವುದು ಹಾಗೂ ಹಲವು ಸ್ವಚ್ಛತಾ ಕಾರ್ಯಕ್ರಮಗಳು ನಡೆಯಲಿವೆ. ಈ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಸಾರ್ವಜನಿಕರು ಕೈಜೋಡಿಸಬೇಕೆಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮನವಿ ಮಾಡಿದ್ದಾರೆ. ಈ ಉಪಕ್ರಮದಡಿ ಗಿಡಗಳನ್ನು ನೆಡುವುದು, ನೃತ್ಯ ಸೇರಿದಂತೆ ಸಾಂಸ್ಕೃತಿಕ ಉತ್ಸವಗಳನ್ನು ಆಯೋಜಿಸುವುದು, ಸಾರ್ವಜನಿಕ ಕಚೇರಿ, ಶೌಚಾಲಯ ಹಾಗೂ ಉದ್ಯಾನಗಳನ್ನು ಸ್ವಚ್ಛ ಮಾಡುವುದು ಮತ್ತು ಅಮ್ಮನ ಹೆಸರಿನಲ್ಲಿ ಪ್ರತಿಯೊಬ್ಬರೂ ಒಂದು ಗಿಡ ನೆಡುವ ಕಾರ್ಯಕ್ರಮಗಳು ಸೇರಿವೆ. ಜೊತೆಗೆ ಪೌರ ಕಾರ್ಮಿಕರು, ಸಫಾಯಿ ಕರ್ಮಚಾರಿಗಳ ಆರೋಗ್ಯ ತಪಾಸಣೆ ಹಮ್ಮಿಕೊಳ್ಳಲಾಗಿದೆ. ಅಕ್ಟೋಬರ್ ೨ರ ಗಾಂಧೀ ಜಯಂತಿ ದಿನದಂದು ಸ್ವಚ್ಛತಾ ದಿನ ಆಚರಿಸಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಭಾರತೀಯ ಸಂಸ್ಕೃತಿ, ಮೌಲ್ಯಗಳನ್ನು ಜಗತ್ತಿಗೆ ಸಾರಿದ ಸ್ವಾಮಿ ವಿವೇಕಾನಂದರು, ಸ್ವಾಭಿಮಾನದ ನಿಜವಾದ ಸಂಕೇತ. ಅವರ ಆದರ್ಶವನ್ನು ವಿದ್ಯಾರ್ಥಿಗಳು ಮೈಗೂಡಿಸಿಕೊಳ್ಳಬೇಕು ಎಂದು ಸ್ಪೀಕರ್ ಯು.ಟಿ.ಖಾದರ್ ಹೇಳಿದ್ದಾರೆ. ಮಂಗಳೂರಿನ ರಾಮಕೃಷ್ಣ ಮಠದಲ್ಲಿಂದು ನಡೆದ ಶೈಕ್ಷಣಿಕ ವಿಚಾರ ಸಂಕಿರಣದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವ್ಯಕ್ತಿತ್ವ ಬೆಳವಣಿಗೆಗೆ ಮೌಲ್ಯ ಶಿಕ್ಷಣ ಅಗತ್ಯ. ದೇಶದ ಘನತೆ ಹೆಚ್ಚಿಸಿದ ಮಹಾತ್ಮರ

ಆದರ್ಶಗಳು ವಿದ್ಯಾರ್ಥಿಗಳಿಗೆ ಪ್ರೇರಣಾದಾಯಿ ಎಂದರು. ಯುವ ಸಮುದಾಯ ಬಲಿಷ್ಠವಾದಾಗ ಮಾತ್ರ ದೇಶ ಸುಭದ್ರವಾಗಿರಲು ಸಾಧ್ಯ. ಆದ್ದರಿಂದ ವಿದ್ಯಾರ್ಥಿಗಳು ದೇಶದ ಕಲ್ಪನೆಯೊಂದಿಗೆ ಮತ್ತು ಸದ್ವಿಚಾರಗಳೊಂದಿಗೆ ಮುನ್ನಡೆಯಬೇಕು ಎಂದು ಯು.ಟಿ.ಖಾದರ್ ಹೇಳಿದರು.

**<><*<><>*><>**

ಇದೇ ಡಿಸೆಂಬರ್‌ನಲ್ಲಿ ಮಂಡ್ಯದಲ್ಲಿ ನಡೆಯಲಿರುವ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ನಿಗದಿತ ಸ್ಥಳದಲ್ಲೇ ನಡೆಸಲಾಗುವುದು. ಸ್ಥಳ ಬದಲಾವಣೆ ಇಲ್ಲ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ಮಹೇಶ್ ಜೋಶಿ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮ್ಮೇಳನಕ್ಕೆ ಸಂಬಂಧಿಸಿದಂತೆ ಕನ್ನಡ ಜ್ಯೋತಿ ರಥಯಾತ್ರೆ ರಾಜ್ಯದ ಪ್ರತಿ ಜಿಲ್ಲೆಯಲ್ಲೂ ಸಾಗಲಿದ್ದು, ಇದರ ಉಸ್ತುವಾರಿಯನ್ನು ಆಯಾ ಜಿಲ್ಲೆಯ ಜಿಲ್ಲಾಡಳಿತ ವಹಿಸಿಕೊಳ್ಳಬೇಕೆಂದು ಮನವಿ ಮಾಡಿದರು.

**<><*<><>*><>**

ರಾಜ್ಯಾದ್ಯಂತ ನೈಋತ್ಯ ಮುಂಗಾರು ದುರ್ಬಲವಾಗಿತ್ತು. ಕರಾವಳಿ ಕರ್ನಾಟಕದ ಅನೇಕ ಸ್ಥಳಗಳಲ್ಲಿ ಮತ್ತು ಒಳನಾಡಿನ ಪ್ರತ್ಯೇಕ ಸ್ಥಳಗಳಲ್ಲಿ ಮಳೆಯಯಾಗಿದೆ. ಉಡುಪಿಯಲ್ಲಿ ೫ ಸೆಂಟಿಮೀಟರ್. ಶಿರಾಲಿ, ಕುಂದಾಪುರ, ಕಾರ್ಕಳ, ಲೋಂಡಾ, ಭಾಗಮಂಡಲ, ಎನ್‌ಆರ್‌ಪುರ, ಜಯಪುರ, ಶಿವಮೊಗ್ಗದ ಹುಂಚದ ಕಟ್ಟೆಯಲ್ಲಿ ತಲಾ ೧ ಸೆಂಟಿ ಮೀಟರ್ ಮಳೆಯಾಗಿದೆ.

**<><*<><>*><>**

ಸಂಕ್ಷಿಪ್ತ ಸುದ್ದಿ

೧. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ ಯೋಜನೆಯಡಿಯಲ್ಲಿ "ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ'ಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತ ಕ್ರೀಡಾಪಟುಗಳು ಇದೇ ೧೬ ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ನಮೂನೆಗಳು ಹಾಗೂ ಮಾರ್ಗಸೂಚಿಯನ್ನು ಪಡೆದು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ: ೦೮೧೫೨-೨೨೨೩೨೦, ೮೧೦೫೬೬೦೮೭೦, ೯೬೨೦೫೪೩೭೦೦ ಸಂಪರ್ಕಿಸಬಹುದು ಎಂದು ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

೨. ಚಿಕ್ಕಬಳ್ಳಾಪುರ ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಚೇರಿ ವ್ಯಾಪ್ತಿಯಲ್ಲಿ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ೪೩ ಹುದ್ದೆಗಳಿಗೆ ಅರ್ಹ ಆಸಕ್ತ ಸ್ಥಳೀಯ ಮಹಿಳಾ ಅಭ್ಯರ್ಥಿಗಳು ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿದೆ. ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಲು ಅಕ್ಟೋಬರ್ ೧೯ ಕಡೆಯ ದಿನವಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**